# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಜಂಟಿ ನಿರ್ದೇಶಕರು, ನಗರ ಯೋಜನೆ (ದಕ್ಷಿಣ) ರವರ ಕಛೇರಿ, ಎನ್.ಆರ್.ವೃತ್ತ, ಬೆಂಗಳೂರು –02.

ದಿನಾಂಕ: 23-11-2020.

ಸಂಖ್ಯೆ: ಜಂನಿನಯೋ (ದ)/ಪ್ರಾ.ಪ/ಸನಿ/12/2020-21

Joint Director Building License (South)

## ಪ್ರಾರಂಭಿಕ ಪ್ರಮಾಣ ಪತ್ರ

ವಿಷಯ: ಖಾತಾ ಸಂಖ್ಯೆ 29, ಪಿಐಡಿ ಸಂಖ್ಯೆ 49-40-29, ಕೆಪಿ ಪುಟ್ಟಣ ಚೆಟ್ಟಿ ರಸ್ತೆ, ದಕ್ಷಿಣ ವಲಯ, ವಾರ್ಡ್ ಸಂಖ್ಯೆ 143, ಬೆಂಗಳೂರು ಇಲ್ಲಿ ನಿರ್ಮಿಸುತ್ತಿರುವ ವಸತಿ ಸಮುಚ್ಚಯ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣ ಪತ್ರ ನೀಡುವ ಬಗ್ಗೆ.

ಉಲ್ಲೇಖ: 1) ಅರ್ಜಿದಾರರ ಪ್ರಾರಂಭಿಕ ಪ್ರಮಾಣ ಪತ್ರ ನೀಡಲು ಕೋರಿರುವ ಮನವಿ ದಿನಾಂಕ: 06-07-2020.
2) ನಕ್ಷೆ ಮಂಜೂರಾತಿ ಸಂಖ್ಯೆ: BBMP/ Addl.Dir/JD South/ 0234/17-18 ದಿನಾಂಕ: 15-02-2018.
3) ಅಪರ ನಿರ್ದೇಶಕರು, ಕಟ್ಟಡ ಪರವಾನಗಿ ಕೋಶ ರವರ ಅನುಮೋದನೆ ದಿನಾಂಕ: 15-10-2020.

O/C

*****

ಖಾತಾ ಸಂಖ್ಯೆ 29, ಪಿಐಡಿ ಸಂಖ್ಯೆ 49-40-29, ಕೆಪಿ ಪುಟ್ಟಣ ಚೆಟ್ಟಿ ರಸ್ತೆ, ದಕ್ಷಿಣ ವಲಯ, ವಾರ್ಡ್ ಸಂಖ್ಯೆ 143, ಬೆಂಗಳೂರು ಇಲ್ಲಿನ ಸ್ವತ್ತಿನಲ್ಲಿ 2ತಳ+ ನೆಲ+ಮೇಲಿನ 17 ಅಂತಸ್ತುಗಳ 48 ಘಟಕಗಳುಳ್ಳ ವಸತಿ ಸಮುಚ್ಚಯ ಕಟ್ಟಡಕ್ಕೆ ಎಲ್.ಪಿ. ಸಂಖ್ಯೆ: BBMP/ Addl.Dir/JD South/ LP/0234/17-18 ದಿನಾಂಕ: 15-02-2018 ರಂದು ನಕ್ಷೆ ಮಂಜೂರಾತಿ ನೀಡಲಾಗಿರುತ್ತದೆ. ಉಲ್ಲೇಖ (1) ರ ಮನವಿಗೆ ಸಂಬಂಧಿಸಿದಂತೆ, ವಸತಿ ಸಮುಚ್ಚಯ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣ ಪತ್ರ ನೀಡುವ ಸಲುವಾಗಿ ದಿನಾಂಕ: 14-07-2020 ರಂದು ಸ್ಥಳ ಪರಿಶೀಲಿಸಲಾಗಿ ಮಂಜೂರಾತಿ ನಕ್ಷೆಯನ್ವಯ ಅಗತ್ಯ ನಡುಜಾಗಗಳನ್ನು ಬಿಟ್ಟು ಆರ್.ಸಿ.ಸಿ ಕಂಬಗಳನ್ನು ನಿರ್ಮಿಸಿದ್ದು, ಸದರಿ ಪ್ರಸ್ತಾವನೆಗೆ ಉಲ್ಲೇಖ (3) ರಂತೆ ಅಪರ ನಿರ್ದೇಶಕರು, ಕಟ್ಟಡ ಪರವಾನಗಿ ಕೋಶ ರವರು ಅನುಮೋದನೆ ನೀಡಿರುತ್ತಾರೆ. ಪ್ರಾರಂಭಿಕ ಪ್ರಮಾಣ ಪತ್ರಕ್ಕೆ ಅಗತ್ಯ ಶುಲ್ಕವಾದ ರೂ. 95,000/–ಗಳನ್ನು ಅರ್ಜಿದಾರರಿಂದ ರಸೀದಿ ಸಂಖ್ಯೆ: RE-ifms624-TP/000052 ದಿನಾಂಕ: 20-10-2020 ರಂದು ಸಂದಾಯಿಸಿಕೊಳ್ಳಲಾಗಿದೆ. ಆದುದರಿಂದ ವಸತಿ ಸಮುಚ್ಚಯ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣ ಪತ್ರವನ್ನು ಈ ಕೆಳಕಂಡ ಷರತ್ತಿಗೊಳಪಡಿಸಿ ನೀಡಲಾಗಿದೆ.

1) ಕಟ್ಟಡ ಕಾಮಗಾರಿಯನ್ನು ಮಂಜೂರಾತಿ ನಕ್ಷೆಯಂತೆ ನಿಯಮಾನುಸಾರ ನಿರ್ಮಿಸತಕ್ಕದ್ದು.
2) ಕಟ್ಟಡ ನಿರ್ಮಾಣದ ಪ್ರಗತಿಯನ್ನು ಕಾಲಾನುಸಾರ ಸಂಬಂಧಪಟ್ಟ ಕಛೇರಿಗೆ ಮಾಹಿತಿಯನ್ನು ನೀಡಿ ಮಂಜೂರಾತಿ ನಕ್ಷೆಯಂತೆ ನಿರ್ಮಿಸುತ್ತಿರುವ ಬಗ್ಗೆ ಪರಿವೀಕ್ಷಣೆಗೆ ಒಳಪಡಿಸತಕ್ಕದ್ದು.
3) ಕಟ್ಟಡ ನಿರ್ಮಾಣದ ಸ್ಥಳದಲ್ಲಿ ಅಕ್ಕ–ಪಕ್ಕದವರಿಗೆ ತೊಂದರೆಯಾಗದಂತೆ ಹಾಗೂ ಕೆಲಸಗಾರರಿಗಾಗಿ ಶೆಡ್ ಮತ್ತು ತಾತ್ಕಾಲಿಕ ಶೌಚಾಲಯಗಳನ್ನು ನಿರ್ಮಿಸತಕ್ಕದ್ದು.
4) ನಕ್ಷೆ ಮಂಜೂರಾತಿ ಪಡೆದ ದಿನಾಂಕದಿಂದ ಐದು ವರ್ಷದೊಳಗಾಗಿ ಕಟ್ಟಡದ ಕಾಮಗಾರಿಯನ್ನು ಪೂರ್ಣಗೊಳಿಸಿ ಸ್ವಾಧೀನಾನುಭವ ಪ್ರಮಾಣ ಪತ್ರವನ್ನು ಪಡೆಯತಕ್ಕದ್ದು.

23/11/2020

ಜಂಟಿ ನಿರ್ದೇಶಕರು, ನಗರ ಯೋಜನೆ (ದಕ್ಷಿಣ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

23/11/2020

23/11

5) ಕಟ್ಟಡ ನಿರ್ಮಾಣ ಮತ್ತು ಕಟ್ಟಡ ತೆರವಿನ ತ್ಯಾಜ್ಯದ ನಿರ್ವಹಣೆ ಮತ್ತು ವಿಲೇವಾರಿಯನ್ನು ಮಾಡಲು ಘನತ್ಯಾಜ್ಯ ನಿರ್ವಹಣೆ (ಎಸ್.ಡಬ್ಲ್ಯೂ.ಎಂ) ಉಪನಿಯಮ 2016 ರಂತೆ ನಿರ್ವಹಿಸುವುದು.

6) ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯಿಂದ ಸಂಸ್ಕರಿಸಿದ (Treated Water Utilisation for Construction) ನೀರನ್ನು ಕಟ್ಟಡ ನಿರ್ಮಾಣ ಕಾರ್ಯಕ್ಕೆ ಕಡ್ಡಾಯವಾಗಿ ಒಳಸಿಕೊಳ್ಳುವುದು.

7) ಅರ್ಜಿದಾರರು ವಿದ್ಯುತ್ ಚಾಲಿತ ವಾಹನಗಳ ಚಾರ್ಜಿಂಗ್ ಪಾಯಿಂಟ್‌ಗಳನ್ನು ಅಳವಡಿಸಲು ಅಗತ್ಯ ಕ್ರಮವಹಿಸುವುದು.

8) ಅರ್ಜಿದಾರರು ಪ್ರತಿ 240.00 ಚ.ಮೀ ಅನುಪಾತ ವಿಸ್ತೀರ್ಣಕ್ಕೆ ಒಂದರಂತೆ ಗಿಡವನ್ನು ನೆಡುವುದು.

ಸಹಿ/-
ಜಂಟಿ ನಿರ್ದೇಶಕರು, ನಗರ ಯೋಜನೆ (ದಕ್ಷಿಣ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಗೆ

Sri. B.S. Nesara
Rep by its Director
M/s. Concorde Housing Corporation Pvt. Ltd.,
GPA Holder B.G. Vasudeva & Others
# 46/A, 1st Main Road,
Sarakki Industrial Layout
J.P. Nagar, 3rd Phase
Bangalore – 560 078.

ಪ್ರತಿಯನ್ನು: ಕಾರ್ಯಪಾಲಕ ಅಭಿಯಂತರರು (ಚಿಕ್ಕಪೇಟೆ ವಿಭಾಗ)/ ಸಹಾಯಕ ಕಾರ್ಯಪಾಲಕ ಅಭಿಯಂತರರು, ಕೆಂಪೇಗೌಡನಗರ ಉಪ ವಿಭಾಗ ರವರಿಗೆ ಮಾಹಿತಿಗಾಗಿ ಮತ್ತು ಕ್ರಮಕ್ಕಾಗಿ.

23/11/2020

ಜಂಟಿ ನಿರ್ದೇಶಕರು, ನಗರ ಯೋಜನೆ (ದಕ್ಷಿಣ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

23/11/2020 23/11/2020 23/11

4/12/2020